1656 (2113) ಶ್ರೀ ರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ರಾಜ್ಯದಲ್ಲಿನ ವಿವಿಧ ನ್ಯಾಯಾಲಯಗಳಲ್ಲಿ ಇತ್ಯರ್ಥವಾಗದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; (ಸಿವಿಲ್ ಮತ್ತು ಕ್ರಿಮಿನಲ್ ಪ್ರತ್ಯೇಕವಾಗಿ)

ಆ. ಈ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):

ಅ. ಅರೆ ನ್ಯಾಯಕ ಪ್ರಕರಣಗಳನ್ನು ಹೊರತುಪಡಿಸಿ ದಿನಾಂಕ 31.12.2004ರ ಅಂತ್ಯಕ್ಕೆ ಇತ್ಯರ್ಥವಾಗದೆ ಉಳಿದಿರುವ ಪ್ರಕರಣಗಳು

1) ಸಿವಿಲ್ ಪ್ರಕರಣಗಳು	– 7,28,360
2) ಕ್ರಿಮಿನಲ್ ಪ್ರಕರಣಗಳು	– 4,95,644
ಒಟ್ಟು	12,24,004

ಆ. ರಾಜ್ಯದಲ್ಲಿನ ವಿವಿಧ ನ್ಯಾಯಾಲಯಗಳಲ್ಲಿ ಇತ್ಯರ್ಥವಾಗದೆ ಇರುವ ಪ್ರಕರಣಗಳ ವೀಲೇವಾರಿಯನ್ನು ಚುರುಕುಗೊಳಿಸಲು ಕಾನೂನು ಇಲಾಖೆ : ನ್ಯಾಯಾಂಗ ಆಡಳಿತ ನೀತಿ ಮತ್ತು ಕ್ರಿಯಾ ಯೋಜನೆಯನ್ನು ರೂಪಿಸಿದ್ದು ಶೀಘ್ರದಲ್ಲಿಯೇ ಅನುಷ್ಠಾನಗೊಳಿಸಲಾಗುವುದು.

1657(2114) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಆಂಧ್ರಪ್ರದೇಶದ ಗಡಿಭಾಗವಾದ ಕೋಲಾರ ಜಿಲ್ಲೆ ಗೌರಿಬಿದನೂರು ತಾಲ್ಲೂಕು, ನಗರಗೆರೆ ಹೋಬಳಿ ಕೇಂದ್ರದಲ್ಲಿ ಪೋಲೀಸ್ ಠಾಣೆ ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ?

ಆ. ಇದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಧರಂಸಿಂಗ್ (ಮುಖ್ಯಮಂತ್ರಿಗಳು):

ಅ. ಇಲ್ಲ

ಆ. ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

1658(2115) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ರಾಜ್ಯದಲ್ಲಿನ ಮೀನುಗಾರರಿಗೆ ವಸತಿ ಸೌಕರ್ಯ ಕಲ್ಪಿಸಿಕೊಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೆ;

ಆ. ಇದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಧರಂಸಿಂಗ್ (ಮುಖ್ಯ ಮಂತ್ರಿಗಳು) :

ಅ. 2004–05 ನೇ ಸಾಲಿನಲ್ಲಿ ಅನುದಾನದ ಕೊರತೆಯಿಂದಾಗಿ ರಾಜ್ಯದ ಮೀನುಗಾರರಿಗೆ ವಸತಿ ಸೌಕರ್ಯ ಕಲ್ಪಿಸಿ ಕೊಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿಲ್ಲ.

ಆ. ಉದ್ಭವಿಸುವುದಿಲ್ಲ.